**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ ಮಂಜೂರು ಮಾಡುವ ಕುರಿತು.**

**ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ:29.06.2011.**

ಕರ್ನಾಟಕ ರಾಜ್ಯ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘ(ರಿ) ರಾಜ್ಯಘಟಕ- ಧಾರವಾಡ.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಆದೇಶದಲ್ಲಿ ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರದ ಆಧಾರದ ಮೇಲೆ ಕೆಲವು ಷರತ್ತಿಗೊಳಪಟ್ಟು ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ 730 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿದೆ.

ಪ್ರಸಕ್ತ ಸರ್ಕಾರವು 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37ರಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಘೋಷಿಸಿದ್ದು, ಈ ಕುರಿತಂತೆ ರಾಜ್ಯ ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ: 21.06.2021**

ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಈ ಕೆಳಕಂಡ ಷರತ್ತುಗಳ ಮೇರೆಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ "ಶಿಶುಪಾಲನಾ ರಜೆ"ಯನ್ನು, ರಜೆಯನ್ನು ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರವು ಮಂಜೂರು ಮಾಡತಕ್ಕದ್ದು.

i) ಮಹಿಳಾ ಸರ್ಕಾರಿ ನೌಕರರು ಹೊಂದಿರುವ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೆ, ಅತ್ಯಂತ ಕಿರಿಯ ಮಗುವು 18 ವರ್ಷ ತಲುಪುವವರೆಗಿನ ಅವಧಿಗೆ ಮಾತ್ರ ಈ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದು.

ii) ಈ ರಜೆಯ ಅವಧಿಯಲ್ಲಿ ಅವಳು ರಜೆಯ ಮೇಲೆ ಹೋಗುವ ನಿಕಟ ಪೂರ್ವದಲ್ಲಿ ಪಡೆಯಲರ್ಹವಿರುವ ಸಂಪೂರ್ಣ ವೇತನಕ್ಕೆ ಸಮನಾದ ರಜೆ ಸಂಬಳಕ್ಕೆ ಅರ್ಹರಾಗತಕ್ಕದ್ದು.

iii) ಪ್ರತಿ ಬಾರಿಯ ಈ ರಜೆ ಮಂಜೂರಾತಿಯು ಕನಿಷ್ಠ 15 ದಿನಗಳಿಗಿಂತ ಕಡಿಮೆ ಇರಬಾರದು.

iv) ಮಹಿಳಾ ಸರ್ಕಾರಿ ನೌಕರರು ಈ ರಜೆಯನ್ನು ಸಾಂದರ್ಭಿಕ ರಜೆಯ ಹೊರತಾಗಿ, ನಿಯಮಾನುಸಾರ ಪಡೆಯಲರ್ಹವಿರುವ ಅಸಾಧಾರಣ ರಜೆಯೂ ಒಳಗೊಂಡಂತೆ ಇತರೆ ರಜೆಯೊಂದಿಗೆ ಸಂಯೋಜಿಸಿ ಪಡೆಯಬಹುದು.

v) ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಲ್ಲ. ಉಪಯೋಗಿಸಿಕೊಳ್ಳದ ಈ ಸೌಲಭ್ಯದ ಸಂಬಂಧದಲ್ಲಿನ ರಜೆಯನ್ನು ಗಳಿಕೆ ರಜೆ ಲೆಕ್ಕಕ್ಕೆ ಜಮೆಗೊಳಿಸಲು/ನಗದೀಕರಿಸಲು ಅವಕಾಶವಿರುವುದಿಲ್ಲ.

vi) ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನಾ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರರು ಆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು. ಅದರೊಂದಿಗೆ ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೂ ಅರ್ಹರಾಗತಕ್ಕದ್ದಲ್ಲ.

vii) ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆಯಿರುವುದಿಲ್ಲ. ಸೇವಾ ಪುಸ್ತಕದಲ್ಲಿ ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡತಕ್ಕದ್ದು.

...2/-

ಘನ ಸರ್ಕಾರಕ್ಕೆ ಅನಂತ ಧನ್ಯವಾದಗಳು

Scanned with CamScanner

viii) ಈ ಪೂರ್ವದಲ್ಲಿ ಮಂಜೂರಾಗಿರುವ ಯಾವುದೇ ಬಗೆಯ ರಜೆಯನ್ನು ಶಿಶುಪಾಲನಾ ರಜೆಯಾಗಿ ಪರಿವರ್ತಿಸತಕ್ಕದ್ದಲ್ಲ. ಈ ಆದೇಶದಡಿಯಲ್ಲಿನ ಸೌಲಭ್ಯವು ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳತಕ್ಕದ್ದು.

ix) ಈ ರಜೆಯನ್ನು ಮಂಜೂರು ಮಾಡುವ ಸಕ್ಷಮವಾದ ಪ್ರಾಧಿಕಾರವು ಶಿಶುಪಾಲನಾ ರಜೆಯ ಮಂಜೂರಾತಿಯನ್ನು ಸೇವಾ ಪುಸ್ತಕದಲ್ಲಿ ದಾಖಲು ಮಾಡುವುದು ಮತ್ತು ನಿಗಧಿತ ನಮೂನೆಯಲ್ಲಿ ಲೆಕ್ಕವಿಡಬೇಕು.(ವಿಶೇಷ ಮಕ್ಕಳ ಶಿಶುಪಾಲನಾ ರಜೆಯ ಲೆಕ್ಕವನ್ನಿಡುವ ಪ್ರಪತ್ರದ ಮಾದರಿಯಲ್ಲಿ)

ಈ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳಿಗೆ ಪ್ರತ್ಯೇಕವಾಗಿ ಸೂಕ್ತ ತಿದ್ದುಪಡಿ ತರಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಕರ್ನಾಟಕ ರಾಜ್ಯ ಸಾವಿತ್ರಿಬಾಯಿ ಫುಲೆ
ಶಿಕ್ಷಕಿಯರ ಸಂಘ(ರಿ) ರಾಜ್ಯಘಟಕ- ಧಾರವಾಡ

Suvarna
(ಬಿ.ಎಸ್.ಸುವರ್ಣ),
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
2. ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
3. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್‌ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

(ಕ್ರಮ ಸಂಖ್ಯೆ:1 ರಿಂದ 3 ಹಾಗೂ 10 ರಿಂದ 17 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ).

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.

Scanned with CamScanner

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರಾಥಮಿಕ ಮಹಿಳಾ ಶಿಕ್ಷಕರಿಗೆ ಶಿಶುಪಾಲನಾ ರಜೆ ಮಂಜೂರಾತಿ ಬಗ್ಗೆ ಸ್ಪಷ್ಟೀಕರಣ ನೀಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ3(5)/ಪ್ರಾ.ಶಿ/ಸ.ಪ್ರಾ.ಶಾ.ಶಿ.ಮನವಿ/01/2020-21, ದಿನಾಂಕ:06/08/2021.

• • •

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯಲ್ಲಿ, ಬುದ್ಧಿ ಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನ ರಜೆಯನ್ನು ಈಗಾಗಲೇ ಸರ್ಕಾರವು ಮಂಜೂರು ಮಾಡಿದೆ. ಹಾಗೆಯೇ 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37 ರಲ್ಲಿ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನ ರಜೆಯನ್ನು ಸರ್ಕಾರಿ ಆದೇಶ ಸಂಖ್ಯೆ:ಆಇ 4(ಇ)ಸೇನಿಸೇ 2021 ಬೆಂಗಳೂರು, ದಿನಾಂಕ:21-06-2021 ಶಿಶುಪಾಲನ ರಜೆಯು ಮಂಜೂರು ಮಾಡಲಾಗಿರುತ್ತದೆ.

ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಶಿಕ್ಷಕರುಗಳಿಗೆ ಶಿಶುಪಾಲನ ರಜೆ ಮಂಜೂರು ಮಾಡಲು ಗೊಂದಲಗಳಿರುವುದರಿಂದ, ಜಿಲ್ಲಾ ಉಪ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಹಾಗೂ ಸರ್ಕಾರಿ ನೌಕರರ ಸಂಘ/ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಗಳಿಂದ ಸ್ಪಷ್ಟೀಕರಣ ನೀಡುವಂತೆ ಕೋರಿಕೆಗಳು ಸ್ವೀಕೃತವಾಗುತ್ತಿದ್ದು, ಸದರಿ ಸ್ಪಷ್ಟೀಕರಣ ಆವಶ್ಯಕತೆ ಇರುವ ಅಂಶಗಳನ್ನು ಸಂಕ್ಷಿಪ್ತವಾಗಿ ವಿವರಿಸಿರುತ್ತಾರೆ.

| ಕ್ರಸಂ | ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತು | ಸ್ಪಷ್ಟೀಕರಣ ಕೋರಿರುವ ಅಂಶಗಳು |
|---|---|---|
| VI | ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತುಗಳು:-(VI) ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 | ಸದರಿ ಆದೇಶವು ಎಲ್ಲಾ ಸರ್ಕಾರಿ ಮಹಿಳಾ ನೌಕರರಿಗೂ ಅನ್ವಯವಾಗುವುದೇ ಎಂಬ ಬಗ್ಗೆ ಸ್ಪಷ್ಟೀಕರಣ ನೀಡುವುದು. |

Scanned with CamScanner

ರಾಜ್ಯದ ಎಲ್ಲಾ ಮಹಿಳಾ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021 ಬೆಂಗಳೂರು. ದಿನಾಂಕ:21-06-2021 ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಕೆಲವೊಂದು ಷರತ್ತಿಗೊಳಪಟ್ಟು ಇಡೀ ಸೇವಾವಧಿಯಲ್ಲಿ ಗರಿಷ್ಠ 6 ತಿಂಗಳ ವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲು ಅನುಮತಿಸಲಾಗಿದೆ.

ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನ ರಜೆ ಸೌಲಭ್ಯಕ್ಕೆ ಅರ್ಹರಾದ ಮಹಿಳಾ ಶಿಕ್ಷಕಿಯರು 180 ದಿನಗಳ ಶಿಶುಪಾಲನಾ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದಲ್ಲ. ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿದ್ದು, 730 ದಿನಗಳ ಶಿಶುಪಾಲನ ರಜೆ ಸೌಲಭ್ಯಕ್ಕೆ ಅರ್ಹರಾದ ಮಹಿಳಾ ಶಿಕ್ಷಕಿಯರನ್ನು ಹೊರತುಪಡಿಸಿ ಉಳಿದ ರಾಜ್ಯದ ಎಲ್ಲಾ ಅರ್ಹ ಮಹಿಳಾ ಶಿಕ್ಷಕಿಯರಿಗೆ 180 ದಿನಗಳ ಶಿಶುಪಾಲನಾ ರಜೆಯ ಸೌಲಭ್ಯವು ಅನ್ವಯವಾಗುತ್ತದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶೇ.50 ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಶಿಕ್ಷಕಿಯರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಒಂದೇ ಶಾಲೆಯಲ್ಲಿ ಒಬ್ಬರಿಗಿಂತ ಹೆಚ್ಚಿನ ಶಿಕ್ಷಕಿಯರು ಶಿಶುಪಾಲನಾ ರಜೆ ಮಂಜೂರಾತಿ ಕೋರಿದಲ್ಲಿ ಅಥವಾ ಮಂಜೂರು ಮಾಡಿದಲ್ಲಿ ಶೈಕ್ಷಣಿಕ ಕಾರ್ಯಗಳಿಗೆ ಅಡಚಣೆಯಾಗುವುದರಿಂದ ಈ ಬಗ್ಗೆ ಮಾರ್ಗದರ್ಶನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 187 ಪಿಡಿಎಸ್ 2021**

**ಬೆಂಗಳೂರು, ದಿನಾಂಕ:17/11/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಮಹಿಳಾ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ:21-06-2021 ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಕೆಲವೊಂದು ಷರತ್ತಿಗೊಳಪಟ್ಟು ಇಡೀ ಸೇವಾವಧಿಯಲ್ಲಿ ಗರಿಷ್ಠ 6 ತಿಂಗಳ ವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲು ಅನುಮತಿಸಲಾಗಿದ್ದು, ಶಿಕ್ಷಣ ಇಲಾಖೆಯ ಶಿಕ್ಷಕಿಯರು ಒಂದೇ ಶಾಲೆಯಲ್ಲಿ ಒಬ್ಬರಿಗಿಂತ ಹೆಚ್ಚಿನ ಶಿಕ್ಷಕಿಯರು ಶಿಶುಪಾಲನಾ ರಜೆ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದಲ್ಲಿ, ಈ ಕೆಳಕಂಡ ಮಾರ್ಗ ಸೂಚಿಯನ್ನು ಅನುಸರಿಸಿ, ಇತ್ಯರ್ಥಪಡಿಸುವಂತೆ ಆದೇಶಿಸಿದೆ.

1. ಒಂದು ಶಾಲೆಯಲ್ಲಿ 2 ಅಥವಾ 2ಕ್ಕಿಂತ ಹೆಚ್ಚು ಮಹಿಳಾ ಶಿಕ್ಷಕರು ರಜೆ ಕೋರಿ ಅರ್ಜಿ ಸಲ್ಲಿಸಿದಲ್ಲಿ, ಅತ್ಯಂತ ಕಿರಿಯ ವಯಸ್ಸಿನ ಮಗುವಿನ ಶಿಕ್ಷಕಿಗೆ ಸೇವಾ ಪುಸ್ತಕದಲ್ಲಿ ಈಗಾಗಲೇ

Scanned with CamScanner

ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ರೊಟೇಷನ್ ಪದ್ಧತಿಯಲ್ಲಿ ಆದ್ಯತೆಯ ಮೇಲೆ ಮಂಜೂರು ಮಾಡುವುದು. (ಪಾಳಿ ಪದ್ಧತಿ)

2. ತಾಲ್ಲೂಕಿನಲ್ಲಿ ರಜೆ ಮಂಜೂರಾತಿ ಕೋರಿರುವ ಎಲ್ಲಾ ಅರ್ಜಿಗಳನ್ನು ಪ್ರಾಧಿಕಾರವು ಅರ್ಹತೆಯ ಆಧಾರದ ಮೇಲೆ ತೀರಾ ಅನಿವಾರ್ಯತೆ ಇರುವ ಹಾಗೂ ಪ್ರಕರಣಗಳ ಗಂಭೀರತೆಯನ್ನು ಪರಿಗಣಿಸಿ, ಆದ್ಯತೆಯ ಮೇಲೆ ಮಂಜೂರಾತಿಗೆ ಕ್ರಮವಹಿಸುವುದು.
3. ಸದರಿ ಸೌಲಭ್ಯವನ್ನು ಹಕ್ಕು ಎಂಬುದಾಗಿ ಪರಿಗಣಿಸಿ, ಕ್ಲೇಮ್ ಮಾಡಲು ಅವಕಾಶವಿರುವುದಿಲ್ಲ. ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರದ (ಶೈಕ್ಷಣಿಕ ವ್ಯವಸ್ಥೆಗೆ ಧಕ್ಕೆಯಾಗದಂತೆ ಕ್ರಮವಹಿಸುವ ಷರತ್ತಿನೊಂದಿಗೆ) ಪೂರ್ವಾನುಮತಿ ಪಡೆದು ನಂತರವೇ ರಜೆಯನ್ನು ಉಪಯೋಗಿಸಿಕೊಳ್ಳುವುದು.
4. ಏಕೋಪಾಧ್ಯಾಯ ಶಾಲೆ/ ಶಿಕ್ಷಕರ ಕೊರತೆ ಇರುವ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಶಿಕ್ಷಕಿಯರು ಈ ರಜೆ ಸೌಲಭ್ಯವನ್ನು ಪಡೆಯಲು ಅರ್ಜಿ ಸಲ್ಲಿಸಿದಲ್ಲಿ ಮಂಜೂರಾತಿ ಸಕ್ಷಮ ಪ್ರಾಧಿಕಾರಿಗಳಾದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೂಕ್ತ ಪರ್ಯಾಯ ವ್ಯವಸ್ಥೆಯನ್ನು ಮಾಡಿದ ತರುವಾಯ ರಜೆ ಮಂಜೂರಾತಿಗೆ ಕ್ರಮವಹಿಸಬಹುದಾಗಿದೆ.
5. ಒಟ್ಟಾರೆ ಶಾಲೆಯ ಶೈಕ್ಷಣಿಕ ಹಿತಕ್ಕೆ ಧಕ್ಕೆಯಾಗದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿಯಮಾನುಸಾರ ಮಂಜೂರಾತಿಗೆ ಕ್ರಮವಹಿಸುವುದು.
6. ಪ್ರತಿ ಬಾರಿಯೂ ಈ ರಜೆ ಮಂಜೂರಾತಿಯು ಕನಿಷ್ಠ 15 ದಿನಗಳು, ಗರಿಷ್ಠ 30 ದಿನಗಳಿಗೆ ಮೀರದಂತೆ ಇರಬೇಕು. (ಶೈಕ್ಷಣಿಕ ಹಿತದೃಷ್ಟಿಯಿಂದ)

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD EXP-8/2021 ದಿನಾಂಕ:09-11-2021ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

17/11/2021

(ಹೆಚ್.ಎಸ್. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
(ಪ್ರಾಥಮಿಕ ಶಿಕ್ಷಣ) ಶಿಕ್ಷಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು (ಅ & ಇ), ಕರ್ನಾಟಕ, ಬೆಂಗಳೂರು.

Scanned with CamScanner

ಕರ್ನಾಟಕ ಸರ್ಕಾರ

## ಜಿಲ್ಲಾ ಪಂಚಾಯಿತಿ,ಉಪನಿರ್ದೇಶಕರು [ಆಡಳಿತ] ರವರ ಕಛೇರಿ,ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

1. E-mail: ddpi.edu.karchk@nic.in phone no:08262-221400 fax:08262-221400.

ಸಂ:-ಇ3/ಸಾಶಿಇ/01/2021-22. ದಿನಾಂಕ:-13/07/2021.

-:ಸುತ್ತೋಲೆ:-

ವಿಷಯ :- ಜಿಲ್ಲೆಯ ಸರ್ಕಾರಿ ಅನುದಾನಿತ ಖಾಸಗಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳು ಸಭ್ಯ ಉಡುಗೆ ಧರಿಸುವ ಬಗ್ಗೆ.

ಉಲ್ಲೇಖ 1 ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ: ಎಡಿಎಂ.2/(1)ಸ.ಉ./2017-18 ದಿನಾಂಕ:26/07/2017.

2 ಕರ್ನಾಟಕ ಸರ್ಕಾರದ ಸಚಿವಾಲಯ ಬೆಂಗಳೂರು ಪತ್ರ ಸಂಖ್ಯೆ: ಸಿಆಸುಇ/65/ಇ.ಅ.ಸು/2013 ದಿನಾಂಕ:12/09/2013.

3 ಅಧ್ಯಕ್ಷರು/ಕಾರ್ಯದರ್ಶಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, (ರಿ) ಜಿಲ್ಲಾ ಘಟಕ ಚಿಕ್ಕಮಗಳೂರು.

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಬೋಧಕ/ಬೋಧಕೇತರ ಸಿಬ್ಬಂದಿಗಳು ಉಲ್ಲೇಖ (1) ಮತ್ತು (2) ರ ಆದೇಶದನ್ವಯ ವಸ್ತ್ರ ಸಂಹಿತೆಯ ಈ ಬಗ್ಗೆ ಸ್ಪಷ್ಟ ಆದೇಶವಿದ್ದು, ಬೋಧಕ/ಬೋಧಕೇತರ ಸಿಬ್ಬಂದಿಗಳು ಸಭ್ಯ ಉಡುಗೆ ಧರಿಸಿ ಕರ್ತವ್ಯ ನಿರ್ವಹಿಸುವುದು ಅವರ ಸ್ವತಂತ್ರವಾಗಿರುತ್ತದೆ, ನಿರ್ದಿಷ್ಟ ಉಡುಗೆಗಳನ್ನು ಧರಿಸಲು ನಿರ್ದೇಶನ ನೀಡಿ ಅವರ ವ್ಯಯಕ್ತಿಕ ಸ್ವತಂತ್ರವನ್ನು ಕಸಿಯುವುದು ಸಾಧ್ಯವಿರುವುದಿಲ್ಲ ಉಲ್ಲೇಖ (3) ರಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಜಿಲ್ಲಾ ಘಟಕ ಚಿಕ್ಕಮಗಳೂರು ಮನವಿ ಮಾಡಿ ಕೆಲವು ಶಾಲೆಗಳಲ್ಲಿ ಮಹಿಳಾ ಶಿಕ್ಷಕರು ಸಭ್ಯ ಉಡುಗೆಯಾದ ಚೂಡಿದಾರ್, ಧರಿಸಿಕೊಂಡು ಬರುವುದರ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿರುವುದನ್ನು ಗಮನಿಸಿ ಮನವಿ ಸಲ್ಲಿಸಿರುತ್ತಾರೆ. ಸಭ್ಯ ಉಡುಗೆ ಧರಿಸುವ ಬಗ್ಗೆ ಈಗಾಗಲೇ ಉಲ್ಲೇಖ (1), (2) ರಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದ್ದು, ಅದರಂತೆ ಜಿಲ್ಲೆಯ ಎಲ್ಲಾ ಸರ್ಕಾರಿ ಅನುದಾನಿತ ಖಾಸಗಿ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಸಂಬಂಧಿಸಿದ ಮುಖ್ಯಸ್ಥರು ಸಭ್ಯ ವಸ್ತ್ರ ಸಂಹಿತೆಯ ಬಗ್ಗೆ ಆಕ್ಷೇಪ ಸಲ್ಲಿಸಬಾರದಾಗಿ ಸೂಚಿಸಿದೆ.

[ಮಲ್ಲೇಶಪ್ಪ ಬಿ [illegible]]
ಉಪನಿರ್ದೇಶಕರು[ಆಡಳಿತ]ಸಾರ್ವಜನಿಕ ಶಿಕ್ಷಣ ಇಲಾಖೆ,
ಚಿಕ್ಕಮಗಳೂರು.

ಗೆ,

ಜಿಲ್ಲೆಯ ಎಲ್ಲಾ ಸರ್ಕಾರಿ/ಅನುದಾನಿತ ಶಾಲೆಗಳ ಮುಖ್ಯಶಿಕ್ಷಕರಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:- 1. ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು,
2. ಅಧ್ಯಕ್ಷರು/ಕಾರ್ಯದರ್ಶಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, (ರಿ) ಜಿಲ್ಲಾ ಘಟಕ ಚಿಕ್ಕಮಗಳೂರು.

Scanned with CamScanner